ಮಂಗಳವಾರ 03.02.2026
ಬೆಂಗಳೂರು, ಬೆಲೆ: 5ರೂ,2 ಪುಟಗಳು
ಸಂಪುಟ 01 – ಸಂಚಿಕೆ 134

Digital Varthe Kannada Daily
Volume 01 - Issue 134
Tuesday, 03.02.2026
Price: 5/- Rs
2 Pages Bangalore

PRGI/RNI: KNKAN/25/A1348

ಡಿಜಿಟಲ್ ವಾರ್ತೆ
ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

# ನಿಯಂತ್ರಣ ತಪ್ಪಿದ ಕಾರು ಕಂಬಕ್ಕೆ ಡಿಕ್ಕಿ: ವಿದ್ಯುತ್ ಇಲಾಖೆ ನೌಕರ ಸಾವು

**ಹಾಸನ:** ಚಾಲಕನ ನಿಯಂತ್ರಣ ತಪ್ಪಿದ ಪರಿಣಾಮ ರಸ್ತೆ ಬದಿಯ ವಿದ್ಯುತ್ ಕಂಬಕ್ಕೆ ಕಾರು ಭೀಕರವಾಗಿ ಡಿಕ್ಕಿ ಹೊಡೆದು, ನಂತರ ಕಾ–ರಿಗೆ ಬೆಂಕಿ ಹೊತ್ತಿಕೊಂಡ ದುರ್ಘಟನೆ ಹಾಸನ ಜಿಲ್ಲೆಯ ಅರಸೀಕೆರೆ ತಾಲೂಕಿನ ಗವಿಮಠ ಗೇಟ್ ಬಳಿ ನಡೆದಿದೆ. ಈ ಅಪಘಾತದಲ್ಲಿ ಒಬ್ಬ ಯುವಕ ಸ್ಥಳದಲ್ಲೇ ಸಾವನ್ನಪ್ಪಿದ್ದು, ಇನ್ನಿಬ್ಬರು ಯುವಕರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಮೃತ ಯುವಕನನ್ನು ವಿದ್ಯುತ್ ಇಲಾಖೆ ನೌಕರ ಮಂಜುನಾಥ್ (25) ಎಂದು ಗುರುತಿಸಲಾಗಿದೆ. ಕಾರಿನಲ್ಲಿ ಹಾರನಹಳ್ಳಿ ಗ್ರಾಮದ ಮಂಜುನಾಥ್, ಪವನ್ ಹಾಗೂ ನವೀನ್ ಎಂಬ ಮೂವರು ಪ್ರಯಾಣಿಸುತ್ತಿದ್ದು, ಅರಸೀಕೆರೆಯಿಂದ ಬಾಣಾವರದ ಕಡೆಗೆ ತೆರಳುತ್ತಿದ್ದರು. ಈ ವೇಳೆ ಚಾಲಕನ ನಿಯಂತ್ರಣ ತಪ್ಪಿ, ಕಾರು ಡಿವೈಡರ್ ದಾಟಿ ಎದುರುಗಡೆಯ ರಸ್ತೆಯ ಪಕ್ಕದಲ್ಲಿದ್ದ ವಿದ್ಯುತ್ ಕಂಬಕ್ಕೆ ಭಾರೀ ವೇಗದಲ್ಲಿ ಡಿಕ್ಕಿ ಹೊಡೆದಿದೆ.



ಡಿಕ್ಕಿಯ ರಭಸಕ್ಕೆ ಕಾರು ಸಂಪೂರ್ಣವಾಗಿ ನಜ್ಜುಗುಜ್ಜಾಗಿ, ಕ್ಷಣಾರ್ಧದಲ್ಲಿ ಬೆಂಕಿ ಹೊತ್ತಿಕೊಂಡಿದೆ. ಅಪಘಾತದ ದೃಶ್ಯವನ್ನು ಕಂಡ ಸ್ಥಳೀಯರು ತಕ್ಷಣ ಧಾವಿಸಿ, ಕಾರಿನೊಳಗಿದ್ದ ಮೂವರನ್ನೂ ಹೊರಗೆ ಕರೆತಂದಿದ್ದಾರೆ. ಆದರೆ ಅಷ್ಟರಲ್ಲಿ ಗಂಭೀರ ಗಾಯಗೊಂಡಿದ್ದ ಮಂಜುನಾಥ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಘಟನೆಯ ಮಾಹಿತಿ ತಿಳಿದು ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸಿದರಾದರೂ, ಅಷ್ಟರೊಳಗೆ ಕಾರು ಸಂಪೂರ್ಣವಾಗಿ ಸುಟ್ಟು ಕರಕಲಾಗಿತ್ತು. ಅಪಘಾತದಲ್ಲಿ ಗಾಯಗೊಂಡಿರುವ ಪವನ್ ಹಾಗೂ ನವೀನ್ ಅವರನ್ನು ತಕ್ಷಣ ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಇಬ್ಬರೂ ಚಿಕಿತ್ಸೆ ಪಡೆಯುತ್ತಿದ್ದಾರೆ. ಅವರ ಆರೋಗ್ಯ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದುಬಂದಿದೆ.

ಅಪಘಾತದ ಸುದ್ದಿ ತಿಳಿದು ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ. ಈ ದುರ್ಘಟನೆ ಬಾಣಾವರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

# ಕೈ ಮುಖಂಡನ ಮಕ್ಕಳ ಬಂಧನಕ್ಕೆ ಲೇಡಿ ಸಿಪಿಐ ಪಟ್ಟು

**ದಾವಣಗೆರೆ:** ಚಿಗಟೇರಿ ಜಿಲ್ಲಾಸ್ಪತ್ರೆ ಆವರಣದಲ್ಲಿ ನಡೆದ ಗಲಾಟೆ ಪ್ರಕರಣಕ್ಕೆ ಸಂಬಂಧಿಸಿ ಆರೋಪಿಗಳನ್ನು ಬಂಧಿಸಲು ಪೊಲೀಸರು ಮುಂದಾದ ವೇಳೆ, ಪೊಲೀಸ್ ಸಿಬ್ಬಂದಿ ಹಾಗೂ ಕಾಂಗ್ರೆಸ್ ಮುಖಂಡರ ನಡುವೆ ತೀವ್ರ ವಾಗ್ವಾದ ನಡೆದಿದ್ದು, ಈ ಸಂಬಂಧಿತ ವೀಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿವೆ.. ಅಲ್ಲದೆ, ಆರೋಪಿಗಳ ಬಂಧನಕ್ಕೆ ಆಗ್ರಹಿಸಿ ಸಿಪಿಐ ಗಾಯಿತ್ರಿಯವರು ತೀವ್ರ ಹೋರಾಟ ನಡೆಸುತ್ತಿರುವ ದೃಶ್ಯಗಳು ಮೊಬೈಲ್ ಕ್ಯಾಮರಾದಲ್ಲಿ ಸೆರೆಯಾಗಿದ್ದು, ಸಾರ್ವಜನಿಕ ವಲಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿವೆ.

ಮಾಹಿತಿಯಂತೆ, ಕಾಂಗ್ರೆಸ್ ಮುಖಂಡ ಅಯೂಬ್ ಪೈಲ್ವಾನ್ ಅವರ ಮಕ್ಕಳಾದ ಹಸೇನ್ ಹಾಗೂ ಹುಸೇನ್ ಮತ್ತು ಅವರ ಸ್ನೇಹಿತರ ನಡುವೆ ಜಿಲ್ಲಾಸ್ಪತ್ರೆ ಆವರಣದಲ್ಲಿ ಗಲಾಟೆ ನಡೆದಿತ್ತು. ಗಲಾಟೆ ಹೆಚ್ಚಾದ ಹಿನ್ನೆಲೆಯಲ್ಲಿ ಸ್ಥಳಕ್ಕೆ ಸಿಪಿಐ ಗಾಯಿತ್ರಿ, ಕಾನ್ಸ್‌ಟೇಬಲ್ ಹರೀಶ್ ಹಾಗೂ ಕೆಂಚಪ್ಪ ಅವರು ತೆರಳಿ ಪರಿಸ್ಥಿತಿ ನಿಯಂತ್ರಣಕ್ಕೆ ಯತ್ನಿಸಿದ್ದರು. ಆದರೆ ಈ ವೇಳೆ ಅಯೂಬ್ ಪೈಲ್ವಾನ್ ಅವರ



ಮಕ್ಕಳು ಹಾಗೂ ಅವರ ಸ್ನೇಹಿತರು ಪೊಲೀಸ್ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ ಆರೋಪ ಕೇಳಿಬಂದಿದೆ.

ಪೊಲೀಸರ ಮೇಲೆ ಹಲ್ಲೆ ನಡೆದ ವಿಚಾರದಿಂದ ಸಿಪಿಐ ಗಾಯಿತ್ರಿಯವರು ತೀವ್ರವಾಗಿ ಆಕ್ರೋಶಗೊಂಡಿದ್ದು, ಆರೋಪಿಗಳನ್ನು ತಕ್ಷಣ ಬಂಧಿಸಬೇಕು ಎಂದು ಪಟ್ಟು ಹಿಡಿದಿದ್ದಾರೆ. ಆರೋಪಿಗಳ ಬಂಧನವಾಗುವವರೆಗೂ ಸ್ಥಳದಿಂದ ತೆರಳುವುದಿಲ್ಲ ಎಂದು ಘೋಷಿಸಿ, ಸಿಪಿಐ ಗಾಯಿತ್ರಿಯವರು ರಸ್ತೆಯಲ್ಲೇ ಕುಳಿತು ಪ್ರತಿಭಟನೆ ನಡೆಸಿದರು. ಈ ಸಂದರ್ಭ ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು.

ಈ ವೇಳೆ ಕಾಂಗ್ರೆಸ್ ಮುಖಂಡ ಅಯೂಬ್ ಪೈಲ್ವಾನ್ ಅವರು, ಪೊಲೀಸರು ಮದ್ಯಪಾನ ಮಾಡಿಕೊಂಡು ಬಂಧನಕ್ಕೆ ಬಂದಿದ್ದಾರೆ ಎಂದು ಆರೋಪ ಮಾಡಿದ್ದು, ಇದಕ್ಕೆ ಪ್ರತಿಕ್ರಿಯಿಸಿದ ಸಿಪಿಐ ಗಾಯಿತ್ರಿ, "ಏನು ಬೇಕಾದರೂ ಆರೋಪ ಮಾಡಿ, ಬೇಕಿದ್ದರೆ ದೂರು ನೀಡಿರಿ" ಎಂದು ತಿರುಗೇಟು ನೀಡಿದ ದೃಶ್ಯಗಳು ವಿಡಿಯೋದಲ್ಲಿ ದಾಖಲಾಗಿವೆ.

ಈ ಪ್ರಕರಣಕ್ಕೆ ಸಂಬಂಧಿಸಿ ಅಯೂಬ್ ಪೈಲ್ವಾನ್ ಅವರ ಪುತ್ರ ಹಸೇನ್ ಸೇರಿದಂತೆ ನಾಲ್ವರನ್ನು ಪೊಲೀಸರು ಬಂಧಿಸಿದ್ದಾರೆ. ಇನ್ನೊಬ್ಬ ಪುತ್ರ ಹುಸೇನ್ ಪ್ರಕರಣದ ಬಳಿಕ ತಲೆಮರೆಸಿಕೊಂಡಿದ್ದು, ಆತನ ಪತ್ತೆಗೆ ಪೊಲೀಸರು ತೀವ್ರ ಶೋಧ ಕಾರ್ಯ ನಡೆಸುತ್ತಿದ್ದಾರೆ. ಘಟನೆ ಸಂಬಂಧ ಮುಂದಿನ ತನಿಖೆ ಮುಂದುವರಿದಿದೆ.

# ಟಿಪ್ಪರ್ ಡಿಕ್ಕಿಯಿಂದ ಕಂಟೈನರ್ ಪಲ್ಟಿ



**ದೊಡ್ಡಬಳ್ಳಾಪುರ:** ಕಂಟೈನರ್ ಗೆ ಡಿಕ್ಕಿ ಹೊಡೆದ ಟಿಪ್ಪರ್: ಮುಗುಚಿ ಬಿದ್ದ ಕಂಟೈ ನರ್ ಚಾಲಕರಿಗೆ ಗಾಯ

ಮುಂದೆ ಹೋಗುತ್ತಿದ್ದ ಕಂಟೈನರ್ ಗೆ ಹಿಂಬದಿಯಿಂದ ವೇಗವಾಗಿ ಬಂದ ಟಿಪ್ಪರ್ ಡಿಕ್ಕಿ ಹೊಡೆದಿದೆ.

ದೊಡ್ಡಬಳ್ಳಾಪುರ ತಾಲೂಕಿನ ಮೆಣಸಿಗೇಟ್ ಮಾರ್ಗವಾಗಿ ಹಾದು ಹೋಗುವ ದಾಬಸ್ ಪೇಟೆ–ಹೊಸಕೋಟೆ ಹೆದ್ದಾರಿಯಲ್ಲಿ ಇಂದು ಬೆಳಗ್ಗೆ ನಡೆದಿದೆ....

ಟಿಪ್ಪರ್ ಡಿಕ್ಕಿ ರಭಸಕ್ಕೆ ಕಂಟೈನರ್ ಹೆದ್ದಾ–ರಿಯಲ್ಲಿ ಮುಗುಚಿ ಬಿದ್ದಿದೆ... ಟಿಪ್ಪರ್ ಮುಂಭಾಗ ಸಂಪೂರ್ಣ ಜಖಂಗೊಂಡಿದೆ... ಚಾಲಕರಿಗೆ ಗಾಯಗಳಾಗಿವೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ...

ಎರಡು ವಾಹನಗಳು ದಾಬಸ್ ಪೇಟೆಯಿಂದ ಹೊಸಕೋಟೆಗೆ ಹಿಂದೆ ಮುಂದೆ ಬರುವ ವೇಳೆ ಮುಂದೆ ಸಾಗುತ್ತಿದ್ದ ಕಂಟೈನರ್ ಗೆ ಹಿಂಬದಿಯಿಂದ ಟಿಪ್ಪರ್ ಡಿಕ್ಕಿ ಹೊಡೆದಿದೆ ಎಂದು ಮೂಲಗಳಿಂದ ತಿಳಿದುಬಂದಿದೆ...



ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ... ಸ್ಥಳಕ್ಕೆ ಪೊಲೀಸ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ...

# ಫೇಕ್ ಆಡಿಯೋ ಕೇಸ್: ಕೆ.ಎಸ್. ಮೋಹನ್ ಕುಮಾರ್ ವಿರುದ್ಧ 100 ಪುಟಗಳ ಚಾರ್ಜ್‌ಶೀಟ್

**ಕೃಷ್ಣರಾಜಪೇಟೆ:** ತಾಲ್ಲೂಕಿನ ಹಿರಿಯ ನ್ಯಾಯವಾದಿ ವಿ.ಎಸ್.ಧನಂ–ಜಯಕುಮಾರ್ ಅವರನ್ನು ರಾಜ–ಕೀಯವಾಗಿ ಹಿನ್ನಡೆ ಉಂಟು ಮಾಡಬೇಕು ಎಂಬ ದುರುದ್ದೇಶದಿಂದ ಭಾವಚಿತ್ರಕ್ಕೆ ಫೇಕ್ ಆಡಿಯೋ ಧ್ವನಿಯೊಂದಿಗೆ ಎಡಿಟ್ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಅಪ್‌ಲೋಡ್ ಮಾಡಿದ್ದ ಕೃಷ್ಣರಾಜಪೇಟೆಯ ಕೆ.ಎಸ್.ಮೋಹನ್ ಕುಮಾರ್ ಎಂಬುವವರ ವಿರುದ್ಧ ಮಂಡ್ಯ ಇಲ್ಲಾ ಸೈಬರ್ ಕ್ರೈಮ್ ಪೊಲೀಸರು 100ಪುಟಗಳ ಸಾಕ್ಷಾದಾರಗಳೊಂದಿಗೆ ದೋಷಾರೋಪಣೆ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದು 5ಕೋಟಿ ರೂಪಾಯಿಗಳ ಮಾನನಷ್ಟ ಮೊಕದ್ದಮೆ ದಾಖಲಿಸಲಾಗಿದೆ. ಇದರಲ್ಲಿ ನ್ಯಾಯ ಸಿಗುವ ವಿಶ್ವಾಸವಿದೆ ಎಂದು ವಕೀಲರಾದ ವಿ.ಎಸ್.ಧನಂಜಯಕುಮಾರ್ ಹೇಳಿದರು.



ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ನ್ಯಾಯವಾದಿ ವಿ.ಎಸ್. ಧನಂಜಯಕುಮಾರ್ ಅವರು ರಾಜ–ಕೀಯ ದ್ವೇಷದ ಹಿನ್ನೆಲೆಯಲ್ಲಿ ಫೇಕ್ ಆಡಿಯೋವನ್ನು 'ಸಾಮಾಜಿಕ ಜಾಲತಾಣ ಕೆ.ಆರ್.ಪೇಟೆ' ಎಂಬ ಫೇಸ್‌ಬುಕ್ ಅಕೌಂಟ್ ಮೂಲಕ ಅಪ್‌ಲೋಡ್ ಮಾಡುವ ಮೂಲಕ ನನಗೆ ಮಾನಸಿಕವಾಗಿ, ಸಾಮಾಜಿಕವಾಗಿ ನೋವುಂಟು ಮಾಡಿರುವ ಕೆ.ಎಸ್. ಮೋಹನ್‌ಕುಮಾರ್ ಅವರು ಬಿಜೆಪಿ ಮುಖಂಡರಾಗಿದ್ದು ನನ್ನನ್ನು ರಾಜ–ಕೀಯವಾಗಿ ತುಳಿಯಬೇಕೆಂಬ ದುರುದ್ದೇಶದಿಂದ ಬೇರೆ ಬೇರೆ ಪಕ್ಷಗಳ ರಾಜಕೀಯ ಮುಖಂಡರು ಸೇರಿಕೊಂಡು ಪಿತೂರಿ ನಡೆಸಿ ನನ್ನ ವಿರುದ್ಧ ಸುಳ್ಳು ಮಾಹಿತಿಯನ್ನು ಹಾಕಿಸಿರುತ್ತಾರೆ. ಈ ವಿಷಯವನ್ನು ಆರೋಪಿಯಾಗಿರುವ ಕೆ. ಎಸ್.ಮೋಹನ್‌ಕುಮಾರ್ ಅವರು ಮಂಡ್ಯ ಜಿಲ್ಲಾ ಸೈಬರ್ ಕ್ರೈಮ್ ಪೊಲೀಸ್ ಅಧಿಕಾರಿಗಳಲ್ಲಿ ತಪ್ಪೊಪ್ಪಿಗೆ ಪತ್ರವನ್ನು ನೀಡಿರುತ್ತಾರೆ. ಈ ಹಿನ್ನೆಲೆಯಲ್ಲಿ ಸುಮಾರು 100ಪುಟಗಳ ದೋಷಾರೋಪಣಾ ಪಟ್ಟಿಯನ್ನು ಐಟಿ–66ಸಿ ಮತ್ತು 66ಇ ಹಾಗೂ ಬಿ.ಎನ್.ಎಸ್. 238 ಮತ್ತು 241ಕಾನೂನುಗಳ ಅನ್ವಯ ಮಂಡ್ಯದ ಹಿರಿಯಶ್ರೇಣಿ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯಕ್ಕೆ ಸಲ್ಲಿಸಿರುತ್ತಾರೆ. ಈ ಸಂಬಂಧ ತಾವು ಸುಮಾರು 5ಕೋಟಿ ರೂಪಾಯಿಗಳ ಮಾನನಷ್ಟ ಮೊಕದ್ದಮೆಯನ್ನೂ ಸಹ ಆರೋಪಿ ಕೆ.ಎಸ್.ಮೋಹನ್‌ಕುಮಾರ್ ಅವರ ವಿರುದ್ಧ ಸಲ್ಲಿಸಿರುತ್ತೇನೆ. ನ್ಯಾಯಾಲಯದಲ್ಲಿ ನನಗೆ ನ್ಯಾಯ ಸಿಗುವ ವಿಶ್ವಾಸವಿದೆ ಎಂದು ನ್ಯಾಯವಾದಿ ವಿ.ಎಸ್.ಧನಂಜಯಕುಮಾರ್ ತಿಳಿಸಿದ್ದಾರೆ.

ನನಗೆ ಆಗಿರುವ ಇಂತಹ ಅನ್ಯಾಯವನ್ನು ಯಾರಿಗೂ ಮಾಡಬಾರದು ಎಂಬ ಉದ್ದೇಶದಿಂದ ನಾನು ಸೈಬರ್ ಕ್ರೈಮ್ ಪೊಲೀಸ್ ಠಾಣೆಯಲ್ಲಿ ನ್ಯಾಯಕ್ಕಾಗಿ ಅರ್ಜಿ ಸಲ್ಲಿಸಿದ್ದೆನು. ನನ್ನ ಅರ್ಜಿಯನ್ನು ಪುರಸ್ಕರಿಸಿ ಸುಮಾರು 6ತಿಂಗಳ ಸುಧೀರ್ಘ ತನಿಖೆ ನಡೆಸಿರುವ ಮಂಡ್ಯದ ಸೈಬರ್ ಕ್ರೈಮ್ ಪೊಲೀಸರು ಆರೋಪಿ ಕೆ.ಎಸ್.ಮೋಹನ್‌ಕುಮಾರ್ ಎಂಬಾತನ ವಿರುದ್ಧ ಸುಮಾರು 100ಪುಟಗಳ ದೋಷಾರೋಪಣೆ ಪಟ್ಟಿ ಸಲ್ಲಿಸುವ ಮೂಲಕ ಸುಳ್ಳು ಮಾಹಿತಿಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಾಕುವವ–ರಿಗೆ ತಕ್ಕ ಪಾಠ ಕಲಿಸಿದ್ದಾರೆ. ನನಗೆ ಆಗಿರುವ ನೋವು ಬೇರೆ ಯಾರಿಗೂ ಆಗದೇ ಇರಲಿ, ಆರೋಪಿ ಕೆ.ಎಸ್. ಮೋಹನ್‌ಕುಮಾರ್ ಮಾಡಿರುವಂತಹ ತಪ್ಪನ್ನು ಬೇರೆ ಯಾರೂ ಸಹ ಮಾಡದೇ ಇರಲಿ ಎಂಬ ಕಾರಣದಿಂದ ಈ ಆರೋಪಿಯ ವಿರುದ್ಧ 5ಕೋಟಿ ರೂಪಾಯಿಗಳ ಮಾನನಷ್ಟ ಮೊಕದ್ದಮೆ ಸಹ ಹೂಡಿರುತ್ತೇನೆ ಎಂದು ವಿ.ಎಸ್. ಧನಂಜಯಕುಮಾರ್ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ವಕೀಲರಾದ ಗಂಜಿಗೆರೆ ಜಿ.ಜೆ.ಲೋಕೇಶ್, ತಾಲ್ಲೂಕು ಯುವ ಜೆಡಿಎಸ್ ಅಧ್ಯಕ್ಷ ಮಹಾದೇವೇಗೌಡ, ವೀರಶೈವ ಮಹಾಸಭಾ ಮುಖಂಡರಾದ ಸೋಮನಾಥಪುರ ಮಹಾದೇಶ್, ಡಿ.ಸಿ.ಕುಮಾರ್, ಶಿವಪ್ಪ, ಮುಖಂಡರಾದ ಚಟ್ಟೇನಹಳ್ಳಿ ನಾಗರಾಜು, ಮತ್ತೀಕೆರೆ ಎಂ.ಲಕ್ಕೇಗೌಡ, ಬಳ್ಳೇಕೆರೆ ಗ್ರಾ.ಪಂ. ಉಪಾಧ್ಯಕ್ಷ ಹೆಮ್ಮಡಹಳ್ಳಿ ತಿಮ್ಮೇಗೌಡ, ಮಾಜಿ ಸೈನಿಕ ಸುಕುಮಾರ್, ನಾರ್ಗೋನಹಳ್ಳಿ ಸ್ವಾಮಿ, ವೆಂಕಟೇಶ, ಬೂಕಹಳ್ಳಿ ಶಿವಕುಮಾರ್, ಸಾಸಲು ವಿಶ್ವನಾಥ್, ಚೌಡಸಮುದ್ರ ಶಿವಮೂರ್ತಿ, ನಂದಣ್ಣ, ಮಾಕವಳ್ಳಿ ತಮ್ಮಣ್ಣ, ಗಂಜಿಗೆರೆ ಕುಮಾರ್ ಮತ್ತಿತರರು ಉಪಸ್ಥಿತರಿದ್ದರು

# ಅಂಚಿನ ಬದುಕುಗಳಿಗೆ ಆಸರೆ ಆಗೋಣ



**ನೆಲಮಂಗಲ:** ಉತ್ತರ ಕರ್ನಾಟಕ ಭಾಗದಿಂದ ಜೀವನೋಪಾಯಕ್ಕಾಗಿ ವಲಸೆ ಬಂದು ಸೋಂಪುರ ಸುತ್ತಮುತ್ತ ವಾಸವಿರುವ ದುರ್ಬಲ ಸಮುದಾಯಗಳು ಅನೇಕ ಸಾಮಾಜಿಕ ಹಾಗೂ ಆರ್ಥಿಕ ಸಮಸ್ಯೆಗಳ ನಡುವೆ ಜೀವನ ಸಾಗಿಸುತ್ತಿವೆ. ಈ ಸಮುದಾಯಗಳ ಮಕ್ಕಳು ಶಿಕ್ಷಣ ಮತ್ತು ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿರುವುದನ್ನು ಗಮನಿಸಿದ ವಿವಿಧ ಸ್ವಯಂಸೇವಾ ಸಂಸ್ಥೆಗಳು, ಅವರ ಬದುಕಿಗೆ ಆಸರೆ ನೀಡುವ ಉದ್ದೇಶದಿಂದ ಮುಂದಾಗಿವೆ.

ಸಮಾಜ ಕಾರ್ಯ ವಿಭಾಗದ ಪ್ರಶಿಕ್ಷಣಾರ್ಥಿ ಮಂಜುನಾಥ ಸಿ. ಕೆಂಗಲ್ ಹಟ್ಟಿ ಮಾತನಾಡಿ, ಅಂಚಿನ ಬದುಕು ನಡೆಸುತ್ತಿರುವ ಸಮುದಾಯಗಳಿಗೆ ಕೈಲಾದ ಮಟ್ಟಿಗೆ ನೆರವು ನೀಡುವುದು ಸಮಾಜದ ಪ್ರತಿಯೊಬ್ಬರ ಜವಾಬ್ದಾ–ರಿಯಾಗಿದೆ ಎಂದು ಹೇಳಿದರು. ಮಕ್ಕಳ ಶಿಕ್ಷಣವೇ ಅವರ ಭವಿಷ್ಯದ ಭದ್ರತೆಗೆ ಮುಖ್ಯವಾದ ಅಸ್ತ್ರವಾಗಿದ್ದು, ಅದಕ್ಕಾಗಿ ಎಲ್ಲರೂ ಕೈಜೋಡಿಸಬೇಕಿದೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭ ಉತ್ತರ ಕರ್ನಾಟಕದಿಂದ ವಲಸೆ ಬಂದ ಸಮುದಾಯಗಳ ಮಕ್ಕಳಿಗೆ ಬ್ಯಾಗ್, ನೋಟ್ ಪುಸ್ತಕ ಸೇರಿದಂತೆ ಅಗತ್ಯ ಶಿಕ್ಷಣೋಪಕರಣಗಳನ್ನು ವಿತರಿಸಲಾಯಿತು. ಅಲ್ಲದೆ ಕುಟುಂಬಗಳಿಗೆ ಚಳಿಗಾಲದ ಹಿನ್ನೆಲೆಯಲ್ಲಿ ಹೊದಿಕೆ ಬಟ್ಟೆಗಳನ್ನು ನೀಡಿ ಮಾನವೀಯ ಬೆಂಬಲ ವ್ಯಕ್ತಪಡಿಸಲಾಯಿತು.

ಸಹಂತ್ರಿ ಸಂಸ್ಥೆಯ ಹರ್ಷಿತಾ ಮಾತನಾಡಿ, ಶಿಕ್ಷಣದಿಂದ ದೂರ ಉಳಿದ ಮಕ್ಕಳನ್ನು ಹತ್ತಿರದ ಸರ್ಕಾರಿ ಶಾಲೆಗಳಿಗೆ ದಾಖಲಿಸಿ, ಅವರು ನಿರಂತರವಾಗಿ ಶಾಲೆಗೆ ಹಾಜರಾಗುವಂತೆ ಪ್ರೋತ್ಸಾಹ ನೀಡುವುದು ಸಂಸ್ಥೆಯ ಮುಖ್ಯ ಗುರಿಯಾಗಿದೆ ಎಂದು ತಿಳಿಸಿದರು.

ಶ್ರೀ ಭೂತಪ್ಪ ಸ್ವಾಮಿ ಸೇವಾ ಟ್ರಸ್ಟ್, ಸಹಂತ್ರಿ ಹಾಗೂ ಅಶ್ವಘ್ನಾನ ಅನಂತ ಸಂಸ್ಥೆಗಳ ಸಹಯೋಗದಲ್ಲಿ ಈ ಕಾರ್ಯ ನಡೆಯುತ್ತಿದ್ದು, ಮಕ್ಕಳಿಗೆ ಅಗತ್ಯವಾದ ಶಿಕ್ಷಣೋಪಕರಣಗಳನ್ನು ಒದಗಿಸುವ ಮೂಲಕ ಅವರ ಕಲಿಕಾ ಪ್ರಯಾಣಕ್ಕೆ ಸಹಕಾರ ನೀಡಲಾಗುತ್ತಿದೆ.

ಕಾರ್ಯಕ್ರಮದಲ್ಲಿ ಗಂಗಾಧರ, ಚಾಂದಿನಿ, ಸಚಿನ್, ಉದಯ್, ಮಂಜುನಾಥ ಸೇ–ರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ನಾಡಿನ ಪ್ರಗತಿಗೆ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಕೊಡುಗೆ ಅಪಾರ: ಶ್ರೀ ಪ್ರಕಾಶನಾಥ ಸ್ವಾಮೀಜಿ




**ಯಶವಂತಪುರ :**ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾಭ್ಯಾಸ ಮಾಡಿರುವ ಲಕ್ಷಾಂತರ ಮಂದಿ ಉತ್ತಮ ಬದುಕು ಭವಿಷ್ಯ ರೂಪಿಸಿಕೊಂಡಿದ್ದಾರೆ ಎಂದು ಬಿಜಿಎಸ್ ಮತ್ತು ಎಸ್‌ಜೆಬಿ ಸಮೂಹ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕ ಶ್ರೀ ಡಾ.ಪ್ರಕಾಶನಾಥ ಸ್ವಾಮೀಜಿ ತಿಳಿಸಿದರು.

ಕೆಂಗೇರಿಯ ಬಿಜಿಎಸ್ ಪಬ್ಲಿಕ್ ಶಾಲೆಯಲ್ಲಿ ನಡೆದ ಬೀಳ್ಕೊಡುಗೆ ಕಾರ್ಯಕ್ರಮ ಅನುಬಂಧ 2026 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬೆಂಗಳೂರು ವ್ಯಾಪ್ತಿಯಲ್ಲೇ ಸುಮಾರು 40 ಸಾವಿರ ವಿದ್ಯಾರ್ಥಿಗಳಿಗೆ ಶ್ರೀಮಠದ ಶಿಕ್ಷಣ ಸಂಸ್ಥೆಗಳು ಗುಣಮಟ್ಟದ, ಮೌಲ್ಯದಾರಿತ ಶಿಕ್ಷಣ ನೀಡುವಲ್ಲಿ ಮುಂಚೂಣಿಯಲ್ಲಿದ್ದು ನಾಡಿನ ಪ್ರಗತಿಯಲ್ಲಿ ಪ್ರಮುಖ ಪಾತ್ರ ವಹಿಸಿವೆ ಎಂದರು.

ಇಸ್ರೋ ವಿಜ್ಞಾನಿ ಡಾ. ಜಿ.ದಿವಾಕರ್ ಮಾತನಾಡಿ, ಇಸ್ರೋ ನೇತೃತ್ವದಲ್ಲಿ ಭಾರತೀಯ ಬಾಹ್ಯಾಕಾಶ ಕ್ಷೇತ್ರ ಮಾನವ ಸಹಿತ ಗಗನ ಯಾತ್ರೆಗೆ ಸಿದ್ಧತೆ ನಡೆಸುತ್ತಿದೆ. ಚಂದ್ರನ ಮೇಲೆ ಬಾಹ್ಯಾಕಾಶ ನಿಲ್ದಾಣ ನಿರ್ಮಾಣದ ಗುರಿ ಹೊಂದಿದೆ. ಮುಂಬರುವ ದಿನಗಳಲ್ಲಿ ಭಾರತೀಯ ಬಾಹ್ಯಾಕಾಶ ಕ್ಷೇತ್ರ ಮತ್ತಷ್ಟು ಸಾಧನೆಗಳನ್ನು ಸಾಕಾರಗೊಳಿಸಲು ಅಣಿಯಾಗುತ್ತಿದೆ ಎಂದರು

ಕಾರ್ಪೊರೇಟ್ ಡಿವಿಷನ್ ಸಂಸ್ಥೆಯ ಪ್ರಧಾನ ವ್ಯವಸ್ಥಾಪಕ ಲತಾ ಕೃಪಾ ಶಂಕರ್ ಮಾತನಾಡಿ, ವಿದ್ಯಾರ್ಥಿಗಳು ಪದವಿಯೊಂದಿಗೆ ಮಾರುಕಟ್ಟೆ ಆಧಾರಿತ ಕೌಶಲ್ಯ ರೂಡಿಸಿಕೊಂಡರೆ ಮಾತ್ರ ಔದ್ಯೋಗಿಕ ರಂಗದಲ್ಲಿ ಯಶಸ್ಸು ಕಾಣಲು ಸಾಧ್ಯ ಎಂದು ಕಿವಿಮಾತು ಹೇಳಿದರು.

ಬಿಜಿಎಸ್ ಸಂಸ್ಥೆಯು ಶಿಕ್ಷಣದೊಂದಿಗೆ ಸಂಸ್ಕಾರಕ್ಕೂ ಆದ್ಯತೆ ನೀಡುತ್ತಿರುವುದು ಶ್ಲಾಘನೀಯ ಕಾರ್ಯ ಎಂದು ಇದೇ ವೇಳೆ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ವೇಳೆ ದಶಕಗಳ ಕಾಲ ಅವಿರತ ಸಲ್ಲಿಸಿದ ಶಿಕ್ಷಕರು, ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಅಮೋಘ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು.

ಅಕಾಡೆಮಿಕ್ ಡೈರೆಕ್ಟರ್ ಪುಟ್ಟರಾಜು, ಪ್ರಾಂಶುಪಾಲೆ ನೇತ್ರಾವತಿ ಮತ್ತಿತರರು ಉಪಸ್ಥಿತರಿದ್ದರು

# ಬಾಂಗ್ಲಾದೇಶದ ಜೈಲಿನಲ್ಲಿದ್ದ ಆಂಧ್ರದ 9 ಮೀನುಗಾರರು ಭಾರತಕ್ಕೆ ವಾಪಾಸ್



**ಹೈದರಾಬಾದ್:** ಕಳೆದ ಮೂರು ತಿಂಗಳಿನಿಂದ ಬಾಂಗ್ಲಾದೇಶದಲ್ಲಿ ಬಂಧನದಲ್ಲಿದ್ದ ಆಂಧ್ರಪ್ರದೇಶದ ವಿಜಯನಗರಂ ಜಿಲ್ಲೆಯ ಒಂಬತ್ತು ಮಂದಿ ಮೀನುಗಾರರು ಕೊನೆಗೂ ಬಿಡುಗಡೆಗೊಂಡು ಸ್ವದೇಶಕ್ಕೆ ಮರಳಿದ್ದಾರೆ. ಜನವರಿ 29ರಂದು ಬಾಂಗ್ಲಾದೇಶದ ಮೀನುಗಾರರನ್ನು ಅಧಿಕೃತವಾಗಿ ಹಸ್ತಾಂತರಿಸಿತು. ನಂತರ ಭಾರತೀಯ ಕೋಸ್ಟ್ ಗಾರ್ಡ್ ಅವರುಗಳನ್ನು ಸ್ಥಳೀಯ ಪೊಲೀಸರ ವಶಕ್ಕೆ ಒಪ್ಪಿಸಿದರು.

ಮಾಹಿತಿಯಂತೆ, 2025ರ ಅಕ್ಟೋಬರ್ ತಿಂಗಳಲ್ಲಿ ಮೀನುಗಾರಿಕೆಗೆ ತೆರಳಿದ್ದ ಈ 9 ಮಂದಿ, ಮೀನುಗಾರಿಕೆ ನಡೆಸುವ ವೇಳೆ ಅಜಾಗರೂಕತೆಯಿಂದ ಸಮುದ್ರದ ಅಂತಾರಾಷ್ಟ್ರೀಯ ಗಡಿಯನ್ನು ದಾಟಿದ್ದರು. ಇದನ್ನು ಗಮನಿಸಿದ ಬಾಂಗ್ಲಾದೇಶದ ನೌಕಾಪಡೆಯ ಅಧಿಕಾರಿಗಳು ಅವರನ್ನು ಬಂಧಿಸಿ, ಮುಂದಿನ ಕ್ರಮವಾಗಿ ಬಗೇರ್‌ಹಟ್ ಜೈಲಿಗೆ ಕಳುಹಿಸಿದ್ದರು. ಅಂದಿನಿಂದ ಅವರು ಬಾಂಗ್ಲಾದೇಶದ ಜೈಲಿನಲ್ಲಿ ಬಂಧನದಲ್ಲಿದ್ದರು.

ಈ ಘಟನೆಗೆ ಸಂಬಂಧಿಸಿ ಭಾರತ ಮತ್ತು ಬಾಂಗ್ಲಾದೇಶದ ನಡುವೆ ರಾಜತಾಂತ್ರಿಕ ಮಟ್ಟದಲ್ಲಿ ನಿರಂತರ ಮಾತುಕತೆಗಳು ನಡೆದಿದ್ದು, ಉಭಯ ದೇಶಗಳ ಸಂಯುಕ್ತ ಪ್ರಯತ್ನದ ಫಲವಾಗಿ ಮೀನುಗಾರರನ್ನು ಬಿಡುಗಡೆ ಮಾಡಲಾಗಿದೆ. ಕಾನೂನು ಪ್ರಕ್ರಿಯೆಗಳು ಪೂರ್ಣಗೊಂಡ ಬಳಿಕ ಬಾಂಗ್ಲಾದೇಶ ಸರ್ಕಾರ ಅವರನ್ನು ಅಧಿಕೃತವಾಗಿ ಬಿಡುಗಡೆ ಮಾಡಿದೆ.

ಬಾಂಗ್ಲಾದೇಶದಿಂದ ಬಿಡುಗಡೆಗೊಂಡ ಮೀನುಗಾರರು ಇಂದು ಸುರಕ್ಷಿತವಾಗಿ ವಿಶಾಖಪಟ್ಟ–ಣಂ ಕರಾವಳಿಗೆ ಆಗಮಿಸಿದ್ದಾರೆ. ಸ್ವದೇಶಕ್ಕೆ ಮರಳಿದ ಮೀನುಗಾರರನ್ನು ನೋಡಿದ ಕುಟುಂಬ ಸದಸ್ಯರು ಭಾವುಕರಾಗಿದ್ದು, ಸಂತಸ ಹಾಗೂ ನಿಟ್ಟುಸಿರು ಬಿಡುವ ವಾತಾವರಣ ಕಂಡುಬಂದಿದೆ. ಹಲವು ತಿಂಗಳ ಆತಂಕದ ನಂತರ ತಮ್ಮ ಆತ್ಮೀಯರನ್ನು ಮರಳಿ ಕಂಡು ಕುಟುಂಬಸ್ಥರು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

ಘಟನೆ ಬಳಿಕ ಸಮುದ್ರ ಗಡಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಮೀನುಗಾರರಿಗೆ ಅಧಿಕಾರಿಗಳು ಹೇಳಿದರೆ.

# ಬಾವಿಯೊಳಗೆ ಕಸದ ಮಧ್ಯೆ ವ್ಯಕ್ತಿಯ ಶವದ ಕತ್ತರಿಸಿದ ಭಾಗಗಳು ಪತ್ತೆ

**ತೆಲಂಗಾಣ:** ರಾಜ್ಯದಲ್ಲಿ ಬೆಚ್ಚಿಬೀಳಿಸುವ ಘಟನೆಯೊಂದು ಬೆಳಕಿಗೆ ಬಂದಿದ್ದು, ಕಾಮರೆಡ್ಡಿ ಜಿಲ್ಲೆಯಲ್ಲಿ ವ್ಯಕ್ತಿಯೊಬ್ಬನ ಕತ್ತರಿಸಲಾದ ಶವಭಾಗಗಳು ಬಾವಿಯೊಂದರಲ್ಲಿ ಪತ್ತೆಯಾಗಿವೆ. ಸುಮಾರು 35 ವರ್ಷದ ಅಪರಿಚಿತ ವ್ಯಕ್ತಿಯ ದೇಹದ ಭಾಗಗಳು ಬಾವಿಯೊಳಗೆ ಪತ್ತೆಯಾಗಿದ್ದು, ಇದು ಭೀಕರ ಹತ್ಯೆಯ ಶಂಕೆಯನ್ನು ಮೂಡಿಸಿದೆ.

ಕಾಮರೆಡ್ಡಿ ಜಿಲ್ಲೆಯಲ್ಲಿ ಇಂದು ಬೆಳಗ್ಗೆ ಈ ಘಟನೆ ಬೆಳಕಿಗೆ ಬಂದಿದೆ. ನೀರು ಇಲ್ಲದ ಬಾವಿಯೊಳಗೆ ಸುರಿದಿದ್ದ ಕಸದ ನಡುವೆ ಶವಭಾಗಗಳು ಇರುವುದು ಮೊದಲು ಗಮನಕ್ಕೆ ಬಂದಿದೆ. ಕಸ ಸಂಗ್ರಹಿಸಲು ಬಂದ ವ್ಯಕ್ತಿಯೊಬ್ಬರು ಬಾವಿಯೊಳಗೆ ಪ್ಲಾಸ್ಟಿಕ್ ಚೀಲವೊಂದನ್ನು ಗಮನಿಸಿದ್ದಾರೆ. ಅನುಮಾನಗೊಂಡ ಅವರು ಚೀಲವನ್ನು ತೆರೆದು ನೋಡಿದಾಗ, ಅದರೊಳಗೆ ಮಾನವ ದೇಹದ ಕೆಳಭಾಗದ ಕತ್ತರಿಸಲಾದ ಭಾಗಗಳು ಪತ್ತೆಯಾಗಿವೆ.

ಚೀಲದೊಳಗೆ ದೇಹದ ಕೆಲವು ಭಾಗಗಳು ಮಾತ್ರ ಇದ್ದು, ತಲೆ ಮತ್ತು ಕೈಗಳು ಕಾಣೆಯಾಗಿರುವುದು ಪತ್ತೆಯಾಗಿದೆ. ಇದರಿಂದ ಹತ್ಯೆ ನಡೆಸಿದ ಬಳಿಕ ಗುರುತು ಮರೆಮಾಚುವ ಉದ್ದೇಶದಿಂದ ಶವವನ್ನು ಬೇರೆಡೆ ಕತ್ತರಿಸಿ, ನಂತರ ಬಾವಿಗೆ ಎಸೆದಿರಬಹುದು ಎಂಬ ಶಂಕೆಯನ್ನು ಪೊಲೀಸರು ವ್ಯಕ್ತಪಡಿಸಿದ್ದಾರೆ.

ಸ್ಥಳೀಯರು ತಕ್ಷಣವೇ ಈ ವಿಷಯವನ್ನು ಪೊಲೀಸರಿಗೆ ತಿಳಿಸಿದ್ದು, ಮಾಹಿತಿ ಪಡೆದ ಕೂಡಲೇ ಕಾಮರೆಡ್ಡಿ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ. ಬಾವಿಯ ಸುತ್ತಮುತ್ತಲ ಪ್ರದೇಶವನ್ನು ಸೀಲ್ ಮಾಡಿ, ಶವಭಾಗಗಳನ್ನು ವಶಕ್ಕೆ ಪಡೆದು ಮುಂದಿನ ತನಿಖೆಗೆ ಕ್ರಮ ಕೈಗೊಂಡಿದ್ದಾರೆ. ಮೃತ ವ್ಯಕ್ತಿಯ ಗುರುತು ಪತ್ತೆ ಹಚ್ಚುವ ಕಾರ್ಯವೂ ಆರಂಭಗೊಂಡಿದೆ.

ಪೊಲೀಸರು ನೀಡಿದ ಪ್ರಾಥಮಿಕ ಮಾಹಿತಿ ಪ್ರಕಾರ, ಮೃತ ವ್ಯಕ್ತಿಗೆ ಪರಿಚಿತರಾಗಿದ್ದವರೇ ಈ ಕೃತ್ಯ ಎಸಗಿರುವ ಸಾಧ್ಯತೆ ಹೆಚ್ಚಿದೆ. ಕೊಲೆ ಮಾಡಿದ ಬಳಿಕ ದೇಹವನ್ನು ತುಂಡರಿಸಿ, ಗುರುತು ಪತ್ತೆಯಾಗದಂತೆ ಶವಭಾಗಗಳನ್ನು ಬಾವಿಗೆ ಎಸೆದಿರಬಹುದು ಎಂದು ಶಂಕಿಸಲಾಗಿದೆ.

ಈ ಪ್ರಕರಣಕ್ಕೆ ಸಂಬಂಧಿಸಿ ಪೊಲೀಸರು ಸ್ಥಳ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ಅಳವಡಿಸಲಾದ ಸಿಸಿಟಿವಿ ಕ್ಯಾಮೆರಾಗಳ ದೃಶ್ಯಾವಳಿಗಳನ್ನು ಪರಿಶೀಲಿಸುತ್ತಿದ್ದಾರೆ. ಪ್ಲಾಸ್ಟಿಕ್ ಚೀಲವನ್ನು ಬಾವಿಗೆ ಎಸೆದ ವ್ಯಕ್ತಿಗಳು ಯಾರು ಎಂಬುದನ್ನು ಪತ್ತೆಹಚ್ಚಲು ಈ ದೃಶ್ಯಾವಳಿಗಳು ಪ್ರಮುಖ ಸಾಕ್ಷಿಯಾಗುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಗ್ಯಾಸ್ ಸೋರಿಕೆಯಾಗಿ ಅಗ್ನಿ ಅವಘಡ ಒಂದೇ ಕುಟುಂಬದ ಮೂವರು ದುರ್ಮರಣ



**ರಾಮನಗರ:**ಕನಕಪುರದಲ್ಲಿ ಅಡುಗೆ ಮಾಡುವ ವೇಳೆ ಅನಿಲ ಸೋರಿಕೆಯಿಂದ ಉಂಟಾದ ಭೀಕರ ಅಗ್ನಿ ಅವಘಡದಲ್ಲಿ ಗಾಯಗೊಂಡಿದ್ದ ಒಂದೇ ಕುಟುಂಬದ ಮೂವರು ಸದಸ್ಯರು ಚಿಕಿತ್ಸೆ ಫಲಿಸದೆ ಸಾವನ್ನಪ್ಪಿರುವ ದುರ್ಘಟನೆ ನಡೆದಿದೆ. ಈ ಘಟನೆ ಕನಕಪುರ ನಗರದಲ್ಲಿ ತೀವ್ರ ಶೋಕದ ವಾತಾವರಣ ನಿರ್ಮಾಣ ಮಾಡಿದೆ. ಮೃತರನ್ನು ಸಿದ್ದರಾಜು (55), ಅವರ ಪತ್ನಿ ಚಂದ್ರಮ್ಮ (50) ಹಾಗೂ ಪುತ್ರ ಪ್ರಶಾಂತ್ (22) ಎಂದು ಗುರುತಿಸಲಾಗಿದೆ. ಕನಕಪುರ ನಗರದ ಅಮರನಾರಾಯಣ ಬ್ಲಾಕ್‌ನಲ್ಲಿ ಕಳೆದ ನಾಲ್ಕು ದಿನಗಳ ಹಿಂದೆ ಮನೆಯಲ್ಲಿ ಅಡುಗೆ ಮಾಡುತ್ತಿದ್ದ ಸಂದರ್ಭ ಗ್ಯಾಸ್ ಸೋರಿಕೆಯಿಂದ ಏಕಾಏಕಿ ಬೆಂಕಿ ಹೊತ್ತಿಕೊಂಡಿತ್ತು. ಬೆಂಕಿಯ ರಭಸಕ್ಕೆ ಮನೆಯೊಳಗಿದ್ದ ಮೂವರೂ ಗಂಭೀರವಾಗಿ ಗಾಯಗೊಂಡಿದ್ದರು.

ತಕ್ಷಣವೇ ಗಾಯಾಳುಗಳನ್ನು ಹೆಚ್ಚಿನ ಚಿಕಿತ್ಸೆಗಾಗಿ ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಲಾಗಿತ್ತು. ಅಲ್ಲಿ ವೈದ್ಯರು ತೀವ್ರ ಚಿಕಿತ್ಸೆ ನೀಡುತ್ತಿದ್ದರೂ, ದುರಾದೃಷ್ಟವಶಾತ್ ಗಾಯಗಳ ತೀವ್ರತೆಯನ್ನು ತಡೆಯಲಾಗದೆ ಸಿದ್ದರಾಜು, ಚಂದ್ರಮ್ಮ ಹಾಗೂ ಪ್ರಶಾಂತ್ ಅವರು ಕ್ರಮೇಣ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ.

ಈ ಅಗ್ನಿ ಅವಘಡ ಕನಕಪುರ ಟೌನ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಪ್ರಕರಣಕ್ಕೆ ಸಂಬಂಧಿಸಿ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಮನೆಮಂದಿಯ ಸಾವು ಸ್ಥಳೀಯರಲ್ಲಿ ಆಘಾತ ಮೂಡಿಸಿದ್ದು, ಮೃತ ತಂದೆ, ತಾಯಿ ಹಾಗೂ ಮಗನನ್ನು ನೆನೆದು ಸಂಬಂಧಿಕರು ಹಾಗೂ ನೆರೆಹೊರೆಯವರು ಕಂಬನಿ ಮಿಡಿದಿದ್ದಾರೆ.

ಒಂದೇ ಕುಟುಂಬದ ಮೂವರು ಸದಸ್ಯರು ಸಾವನ್ನಪ್ಪಿರುವುದು ಕನಕಪುರದಲ್ಲಿ ಆಳವಾದ ದುಃಖದ ಛಾಯೆ ಹರಡಿಸಿದ್ದು, ಗ್ಯಾಸ್ ಬಳಕೆಯಲ್ಲಿ ಹೆಚ್ಚಿನ ಎಚ್ಚರಿಕೆ ಅಗತ್ಯ ಎಂಬುದನ್ನು ಈ ಘಟನೆ ಮತ್ತೊಮ್ಮೆ ನೆನಪಿಸಿದೆ.

## ಮೂರು ಮಕ್ಕಳನ್ನು ಕೊಲೆಗೈದು ವಿಷ ಸೇವಿಸಿದ ತಾಯಿ!



**ಬಾಗಲಕೋಟೆ:** ಭಾನುವಾರ ಬಾದಾಮಿ ತಾಲೂಕಿನ ಹಿರೇ ಮುಚ್ಚಳಗುಡ್ಡ ಗ್ರಾಮದಲ್ಲಿ ತಾಯಿಯೊಬ್ಬಳು ತನ್ನ ಮೂರು ಪುಟ್ಟ ಮಕ್ಕಳಿಗೆ ನೇಣು ಹಾಕಿ ಹತ್ಯೆ ಮಾಡಿದ ಬಳಿಕ ತಾನೂ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿರುವ ಅತ್ಯಂತ ಹೃದಯವಿದ್ರಾವಕ ಘಟನೆ ನಡೆದಿದೆ. ಈ ದುರ್ಘಟನೆ ಇಡೀ ಗ್ರಾಮವನ್ನು ಶೋಕದಲ್ಲಿ ಮುಳುಗಿಸಿದೆ.

ಘಟನೆ ನಡೆಸಿದ ತಾಯಿಯನ್ನು ರೂಪಾ ಹನುಮಂತ ಗೌಡರ (28) ಎಂದು ಗುರುತಿಸಲಾಗಿದೆ. ಮೃತಪಟ್ಟ ಮಕ್ಕಳನ್ನು ಸಮೃದ್ಧಿ ಹನುಮಂತಪ್ಪ ಗೌಡರ (5), ಪ್ರೀತಂ ಹನುಮಂತಪ್ಪ ಗೌಡರ (4) ಹಾಗೂ ಸುಕ್ಷೀತ ಹನುಮಂತಪ್ಪ ಗೌಡರ (2) ಎಂದು ಗುರುತಿಸಲಾಗಿದೆ. ರೂಪಾ ತನ್ನ ಮನೆಯೊಳಗೇ ಮೂವರು ಮಕ್ಕಳಿಗೆ ನೇಣು ಹಾಕಿ ಹತ್ಯೆ ಮಾಡಿರುವುದು ತನಿಖೆಯಲ್ಲಿ ತಿಳಿದುಬಂದಿದೆ.

ಮಕ್ಕಳನ್ನು ಹತ್ಯೆ ಮಾಡಿದ ಬಳಿಕ ರೂಪಾ ವಿಷ ಸೇವಿಸಿದ್ದು, ತಕ್ಷಣವೇ ಆಕೆಯನ್ನು ಬಾಗಲಕೋಟೆಯ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಪ್ರಸ್ತುತ ಆಕೆ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ವೈದ್ಯರ ಮಾಹಿತಿ ಪ್ರಕಾರ ರೂಪಾ ಆರೋಗ್ಯದಲ್ಲಿ ಚೇತರಿಕೆ ಕಾಣಿಸುತ್ತಿದೆ ಎಂದು ತಿಳಿದುಬಂದಿದೆ.

ಪ್ರಾಥಮಿಕ ತನಿಖೆಯ ಪ್ರಕಾರ, ಮನೆಯಲ್ಲಿ ಅತ್ತೆ ಸೊಸೆಯ ನಡುವೆ ನಡೆದ ನಿರಂತರ ಜಗಳ ಮತ್ತು ಕುಟುಂಬ ಕಲಹವೇ ಈ ದುರ್ಘಟನೆಗೆ ಕಾರಣವಾಗಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಘಟನೆಗೆ ಸಂಬಂಧಿಸಿ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ರೂಪಾ ಗೌಡರ ವಿರುದ್ಧ ಕೊಲೆ ಪ್ರಕರಣ ದಾಖಲಿಸಲಾಗಿದೆ. ಜೊತೆಗೆ ಅತ್ತೆ ರೇಣವ್ವಳ ವಿರುದ್ಧ ಕಿರುಕುಳ ನೀಡಿದ ಆರೋಪದಡಿ ಪ್ರತ್ಯೇಕ ದೂರು ದಾಖಲಾಗಿದೆ.

ಮೂರು ಅಮಾಯಕ ಮಕ್ಕಳ ಸಾವಿನಿಂದ ಗ್ರಾಮದಲ್ಲಿ ಶೋಕದ ವಾತಾವರಣ ಆವರಿಸಿದ್ದು, ನೆರೆಹೊರೆಯವರು ಹಾಗೂ ಸಂಬಂಧಿಕರು ಘಟನೆ ನೆನೆದು ಕಂಬನಿ ಮಿಡಿದಿದ್ದಾರೆ. ಕುಟುಂಬ ಕಲಹಗಳು ಎಂತಹ ಭೀಕರ ಪರಿಣಾಮಗಳಿಗೆ ಕಾರಣವಾಗುತ್ತವೆ ಎಂಬುದಕ್ಕೆ ಈ ಪ್ರಕರಣ ದುಃಖದ ಉದಾಹರಣೆಯಾಗಿ ಪರಿಣಮಿಸಿದೆ. ಪೊಲೀಸರು ಪ್ರಕರಣದ ಕುರಿತು ಹೆಚ್ಚಿನ ತನಿಖೆ ಮುಂದುವ–ರಿಸಿದ್ದಾರೆ.

## ಅಕ್ರಮ ಸಂಬಂಧ : ಪ್ರಿಯಕರನ ಜೊತೆ ಸೇರಿ ಮಾವನಿಗೆ ಬೆಂಕಿ ಹಚ್ಚಿದ ಸೊಸೆ



ನಡೆದಿರುವ ಭಯಾನಕ ಘಟನೆಯೊಂದು ನಾಗರಿಕ ಸಮಾಜವನ್ನೇ ಬೆಚ್ಚಿಬೀಳಿಸಿದೆ. 64 ವರ್ಷದ ವೃದ್ಧ ರಾಜೇಂದ್ರನ್ ಅವರನ್ನು ಅವರ ಸೊಸೆ ಜಯಪ್ರಿಯಾ ಹಾಗೂ ಆಕೆಯ ಪ್ರಿಯಕರ ಮಣಿಕಂದನ್ ಸೇರಿದಂತೆ ನಾಲ್ವರು ಸೇರಿ ಜೀವಂತವಾಗಿ ಸುಟ್ಟು ಹಾಕಿದ ಆರೋಪ ಕೇಳಿಬಂದಿದ್ದು, ಈ ಘಟನೆ ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿದೆ. ಗಂಭೀರವಾಗಿ ಸುಟ್ಟುಕೊಂಡಿರುವ ರಾಜೇಂದ್ರನ್ ಅವರನ್ನು ತಕ್ಷಣ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರು ಇದೀಗ ಜೀವನ ಮರಣದ ನಡುವೆ ಹೋರಾಟ ನಡೆಸುತ್ತಿದ್ದಾರೆ.

ಪೊಲೀಸರು ನೀಡಿದ ಮಾಹಿತಿ ಪ್ರಕಾರ, ರಾಜೇಂದ್ರನ್ ಅವರು ತಮ್ಮ ಸೊಸೆ ಜಯಪ್ರಿಯಾ ಮತ್ತು ಆಕೆಯ ಗೆಳೆಯ ಮಣಿಕಂದನ್ ನಡುವಿನ ಅಕ್ರಮ ಸಂಬಂಧವನ್ನು ಪದೇಪದೇ ಪ್ರಶ್ನಿಸುತ್ತಿದ್ದರು. ಈ ವಿಚಾರವನ್ನು ಕೇಂದ್ರವಾಗಿಟ್ಟುಕೊಂಡು ಕುಟುಂಬದೊಳಗೆ ದೀರ್ಘಕಾಲದಿಂದಲೇ ಕಲಹ ಹಾಗೂ ಉದ್ವಿಗ್ನ ವಾತಾವರಣ ಮುಂದುವರಿದಿತ್ತು. ಈ ನಿರಂತರ ಜಗಳ ಮತ್ತು ದ್ವೇಷವೇ ಕೊನೆಗೆ ಇಂತಹ ಅಮಾನವೀಯ ಹಾಗೂ ಭೀಕರ ಕೃತ್ಯಕ್ಕೆ ಕಾರಣವಾಗಿದೆ ಎಂದು ಪೊಲೀಸರು ಶಂಕಿಸಿದ್ದಾರೆ.

ಘಟನೆಯ ದಿನ ರಾಜೇಂದ್ರನ್ ಅವರು ಬೈಕ್‌ನಲ್ಲಿ ತೆರಳುತ್ತಿದ್ದ ವೇಳೆ, ಮಣಿಕಂದನ್ ಹಾಗೂ ಅವನ ಸಹಚರರು ಮಾರ್ಗಮಧ್ಯೆ ಅವರನ್ನು ತಡೆದಿದ್ದಾರೆ. ನಂತರ ಸಾರ್ವಜನಿಕರ ಎದುರಲ್ಲೇ ರಾಜೇಂದ್ರನ್ ಅವರ ಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿ, ಸ್ಥಳದಿಂದ ಪರಾ–ರಿಯಾಗಿದ್ದಾರೆ ಎನ್ನಲಾಗಿದೆ. ಬೆಂಕಿಯಲ್ಲಿ ಸಿಲುಕಿದ ರಾಜೇಂದ್ರನ್ ಅವರ ಕಿರುಚಾಟ ಮತ್ತು ಅಸಹಾಯಕ ಸ್ಥಿತಿಯ ದೃಶ್ಯಗಳು ಸ್ಥಳದಲ್ಲಿದ್ದವರ ಮೊಬೈಲ್‌ಗಳಲ್ಲಿ ದಾಖಲಾಗಿದ್ದು, ಅವುಗಳು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ವೈರಲ್ ಆಗಿವೆ.

ವೈದ್ಯರ ಹೇಳಿಕೆಯಂತೆ, ರಾಜೇಂದ್ರನ್ ಅವರ ದೇಹದ ಸುಮಾರು 70 ಶೇಕಡಾ ಭಾಗ ಸುಟ್ಟುಹೋಗಿದ್ದು, ಅವರು ಆಸ್ಪತ್ರೆಯಲ್ಲಿ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅವರ ಆರೋಗ್ಯ ಸ್ಥಿತಿ ಗಂಭೀರವಾಗಿದ್ದು, ವೈದ್ಯರು ಸತತ ಚಿಕಿತ್ಸೆ ನೀಡುತ್ತಿದ್ದಾರೆ. ಪ್ರಕರಣದ ಗಂಭೀರತೆಯನ್ನು ಮನಗಂಡ ಕಡಲೂರು ಪೊಲೀಸರು ತ್ವ–ರಿತವಾಗಿ ತನಿಖೆ ನಡೆಸಿ, ಪ್ರಮುಖ ಆರೋಪಿಗಳಾದ ಮಣಿಕಂದನ್ ಮತ್ತು ಜಯಪ್ರಿಯಾ ಸೇರಿದಂತೆ ಒಟ್ಟು ನಾಲ್ವರನ್ನು ಬಂಧಿಸಿದ್ದಾರೆ. ಬಂಧಿತ ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ, ನ್ಯಾಯಾಂಗ ವಶಕ್ಕೆ ಕಳುಹಿಸಲಾಗಿದೆ.

ಪೊಲೀಸರು ಈ ಘಟನೆಯನ್ನು ವಿವಾಹೇತರ ಸಂಬಂಧಗಳಿಂದ ಉಂಟಾಗುವ ಕೌಟುಂಬಿಕ ಹಿಂಸಾಚಾರದ ಭಯಾನಕ ಉದಾಹರಣೆ ಎಂದು ವಿವರಿಸಿದ್ದಾರೆ. ಇಂತಹ ಸಂಬಂಧಗಳು ಕೇವಲ ಕುಟುಂಬದೊಳಗಿನ ಕಲಹಕ್ಕಷ್ಟೇ ಸೀಮಿತವಾಗದೇ, ಪ್ರಾಣಹಾನಿಯಂತಹ ಅತಿದಾರುಣ ಪರಿಣಾಮಗಳಿಗೆ ಕಾರಣವಾಗುತ್ತಿರುವುದು ಸಮಾಜಕ್ಕೆ ಗಂಭೀರ ಎಚ್ಚರಿಕೆಯ ಸಂಕೇತವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ದೆಹಲಿ ಪೊಲೀಸರ ಸೋಗಲ್ಲಿ ದರೋಡೆ ಸಿನಿಮಾ ಸ್ಟೈಲ್‌ನಲ್ಲಿ ಆರೋಪಿಗಳು ಲಾಕ್



**ಕಲಬುರಗಿ:** ದೆಹಲಿ ಪೊಲೀಸರಂತೆ ನಕಲಿ ಗುರುತಿನ ಚೀಟಿಗಳನ್ನು ಬಳಸಿ ಸಾರ್ವಜನಿಕರನ್ನು ಮರುಳುಗೊಳಿಸಿ ದರೋಡೆ ನಡೆಸುತ್ತಿದ್ದ ಕುಖ್ಯಾತ ಅಂತಾರಾಜ್ಯ ಗ್ಯಾಂಗ್ ಅನ್ನು ಬಂಧಿಸುವಲ್ಲಿ ಕಲಬುರಗಿ ಪೊಲೀಸರು ಕೊನೆಗೂ ಯಶಸ್ವಿಯಾಗಿದ್ದಾರೆ. ಈ ನೋಟೋರಿಯಸ್ ಗ್ಯಾಂಗ್ ದೆಹಲಿ, ಮಹಾರಾಷ್ಟ್ರ, ತೆಲಂಗಾಣ ಸೇರಿದಂತೆ ಕನಿಷ್ಠ ಐದು ರಾಜ್ಯಗಳ ಪೊಲೀಸರ ನಿದ್ದೆಗೆಡಿಸಿದ್ದರೆಂದು ತಿಳಿದುಬಂದಿದ್ದು, ಆರೋಪಿಗಳ ಬಂಧನವು ಪೊಲೀಸ್ ವಲಯದಲ್ಲಿ ಮಹತ್ವದ ಸಾಧನೆಯಾಗಿ ಪರಿಗಣಿಸಲಾಗಿದೆ.

ಬಂಧಿತ ಆರೋಪಿಗಳಿಂದ ದೆಹಲಿ ಪೊಲೀಸರ ನಕಲಿ ಐಡಿ ಕಾರ್ಡ್‌ಗಳು, 90 ಗ್ರಾಂ ಚಿನ್ನಾಭರಣ ಹಾಗೂ ನಗದು ಸೇರಿ ಒಟ್ಟು ಸುಮಾರು 27 ಲಕ್ಷ ಮೌಲ್ಯದ ವಸ್ತುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಈ ಗ್ಯಾಂಗ್‌ನ ಕೃತ್ಯಗಳು ಹಲವು ರಾಜ್ಯಗಳಲ್ಲಿ ಭಾರೀ ಆತಂಕ ಸೃಷ್ಟಿಸಿದ್ದವು.

ಬಂಧಿತರನ್ನು ದೆಹಲಿ ಹಾಗೂ ಭೂಪಾಲ್ ಮೂಲದ ಜಹೀರ್ ಅಬ್ಬಾಸ್ ಅಲಿ, ಖಾಸೀಂ ಯೂಸುಫ್ ಅಲಿ, ಅಲಿ ಮಿರ್ಜಾ, ಅಲಿ ರಾಜಾ ಶೇಖ್ ಬೇಗ್, ಲಾಲ್ ಶೇಖ್, ಜಫರ್ ಹಾಗೂ ಜಫರ್ ಆಸೀಮ್ ಎಂದು ಗುರುತಿಸಲಾಗಿದೆ. ಇವರು ದೆಹಲಿ ಪೊಲೀಸರ ಸೋಗಿನಲ್ಲಿ ಸಾರ್ವಜನಿಕರ ಬಳಿ ಇದ್ದ ಚಿನ್ನಾಭರಣವನ್ನು ಲೂಟಿ ಮಾಡಿ ಕ್ಷಣಾರ್ಧದಲ್ಲಿ ಸ್ಥಳದಿಂದ ಪರಾರಿಯಾಗುತ್ತಿದ್ದರಂತೆ.

ಪೊಲೀಸ್ ಮೂಲಗಳ ಪ್ರಕಾರ, ಕಳೆದ ವಾರ ಮಾತ್ರವೇ ಆರೋಪಿಗಳು ಮೆಹಬೂಬ್ ನಗರ ಜಿಲ್ಲೆಯಲ್ಲಿ ಎರಡು ಪ್ರತ್ಯೇಕ ಸ್ಥಳಗಳಲ್ಲಿ ದರೋಡೆ ನಡೆಸಿದ್ದರು. ಬಳಿಕ ಕಲಬುರಗಿಗೆ ಆಗಮಿಸಿದ್ದ ಈ ತಂಡದ ಚಲನವಲನಗಳ ಬಗ್ಗೆ ಖಚಿತ ಮಾಹಿತಿ ಲಭಿಸಿದ ಕೂಡಲೇ, ಸಬ್ ಅರ್ಬನ್ ಪೊಲೀಸ್ ಠಾಣೆಯ ಸಿಬ್ಬಂದಿ ಕಾರ್ಯಾಚರಣೆ ನಡೆಸಿ ನಗರದ ತಾವರಗೇರಾ ಕ್ರಾಸ್ ಬಳಿ ಆರೋಪಿಗಳನ್ನು ಬಂಧಿಸಿದ್ದಾರೆ.

ಈ ಗ್ಯಾಂಗ್‌ನ ಮಾಹಿತಿ ನೀಡುವವ–ರಿಗೆ ದೆಹಲಿ ಪೊಲೀಸ್ ಇಲಾಖೆ ಈಗಾಗಲೇ 2 ಲಕ್ಷ ಬಹುಮಾನ ಘೋಷಿಸಿದ್ದರೂ, ಈವರೆಗೂ ಆರೋಪಿಗಳ ಸುಳಿವು ದೊರೆತಿರಲಿಲ್ಲ. ಆದರೆ ನಿರಂತರ ನಿಗಾವಹಿಸಿ ಸಂಯೋಜಿತ ಕಾರ್ಯಾಚರಣೆ ನಡೆಸಿದ ಕಲಬುರಗಿ ಪೊಲೀಸರ ಕೈಗೆ ಕೊನೆಗೂ ಈ ಖದೀಮರು ಸಿಕ್ಕಿಬಿದ್ದಿದ್ದಾರೆ.

ಪೊಲೀಸರು ನೀಡಿದ ಮಾಹಿತಿ ಪ್ರಕಾರ, ಗ್ಯಾಂಗ್‌ನ ಏಳು ಸದಸ್ಯರಲ್ಲಿ ಇಬ್ಬರು ತಮ್ಮನ್ನು ಪಿಎಸ್‌ಐಗಳೆಂದು ಪರಿಚಯಿಸಿಕೊಂಡು ಕಾರ್ಯಾಚರಣೆಗೆ ಇಳಿಯುತ್ತಿದ್ದರು. ಹೆದ್ದಾರಿಗಳಲ್ಲಿ ಕಾರು ಹಾಗೂ ಬೈಕ್‌ನಲ್ಲಿ ಸಂಚರಿಸುವವರನ್ನು ತಡೆದು, ಮುಂದೆ ಕಳ್ಳರು ಸಂಚರಿಸುತ್ತಿದ್ದಾರೆ ಎಂದು ನಂಬಿಸುತ್ತಿದ್ದರು. ನಿಮ್ಮ ಬಳಿ ಇರುವ ಚಿನ್ನಾಭರಣವನ್ನು ಸುರಕ್ಷತೆಗಾಗಿ ನಮಗೆ ಕೊಡಿ ಎಂದು ಹೇಳಿ ಪಡೆದುಕೊಳ್ಳುತ್ತಿದ್ದರು. ಅಷ್ಟರಲ್ಲಿ ಉಳಿದ ಸದಸ್ಯರು ಕಳ್ಳರಂತೆ ಬಂದು ಗಲಾಟೆ ಸೃಷ್ಟಿಸುತ್ತಿದ್ದು, ನಕಲಿ ಅಧಿಕಾರಿಗಳು ಅವರನ್ನು ಓಡಿಸಿ ಕಾಪಾಡಿದಂತೆ ನಟಿಸುತ್ತಿದ್ದರು.

ಈ ನಾಟಕದ ನಡುವೆ, ಸಾರ್ವಜನಿಕ–ರಿಂದ ಪಡೆದ ನಿಜವಾದ ಚಿನ್ನಾಭರಣವನ್ನು ತಮ್ಮ ಬಳಿ ಇಟ್ಟುಕೊಂಡು, ಅದರ ಬದಲಿಗೆ ನಕಲಿ ಚಿನ್ನಾಭರಣವನ್ನು ನೀಡಿ ಕ್ಷಣಮಾತ್ರದಲ್ಲಿ ಸ್ಥಳದಿಂದ ಪರಾರಿಯಾಗುತ್ತಿದ್ದರು. ಇದೇ ಮಾದರಿಯಲ್ಲಿ ದೆಹಲಿ, ಮಹಾರಾಷ್ಟ್ರ, ತೆಲಂಗಾಣ, ಮಧ್ಯಪ್ರದೇಶ ಹಾಗೂ ಆಂಧ್ರ ಪ್ರದೇಶದ ಹಲವೆಡೆ ಲಕ್ಷಾಂತರ ರೂಪಾಯಿ ಮೌಲ್ಯದ ಚಿನ್ನಾಭರಣವನ್ನು ಗ್ಯಾಂಗ್ ಲೂಟಿ ಮಾಡಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಇದಲ್ಲದೆ, ಈ ಗ್ಯಾಂಗ್‌ನ ಒಬ್ಬ ಆರೋಪಿ ಕಲಬುರಗಿಯಲ್ಲಿ ಸಂಬಂಧಿಕನೊಬ್ಬನಿದ್ದ ಕಾರಣ ಇಲ್ಲಿಯೇ ರೂಮ್ ಮಾಡಿಕೊಂಡು ನೆಲೆಸಿದ್ದನು ಎಂಬ ಮಾಹಿತಿಯೂ ಬಹಿರಂಗವಾಗಿದೆ. ಅಲ್ಲಿಂದ ತೆಲಂಗಾಣ ಸೇರಿದಂತೆ ಸುತ್ತಮುತ್ತಲ ರಾಜ್ಯಗಳಲ್ಲಿ ದರೋಡೆ ಕೃತ್ಯಗಳನ್ನು ನಡೆಸುತ್ತಿದ್ದರೆಂಬ ಶಂಕೆಯನ್ನು ಪೊಲೀಸರು ವ್ಯಕ್ತಪಡಿಸಿದ್ದಾರೆ.

ಪ್ರಸ್ತುತ ಬಂಧಿತ ಆರೋಪಿಗಳನ್ನು ನ್ಯಾಯಾಂಗ ವಶಕ್ಕೆ ಒಪ್ಪಿಸಲಾಗಿದ್ದು, ಗ್ಯಾಂಗ್‌ನ ಇತರೆ ಚಟುವಟಿಕೆಗಳು ಹಾಗೂ ಇನ್ನಷ್ಟು ಪ್ರಕರಣಗಳ ಬಗ್ಗೆ ಪೊಲೀಸರು ತೀವ್ರ ತನಿಖೆ ಮುಂದುವರಿಸಿದ್ದಾರೆ.

## ನಾಲ್ಕನೇ ಮಹಡಿಯಿಂದ ಬಿದ್ದು ಯುವಕ ಸಾವು



**ಬೆಂಗಳೂರು:** ನಗರದಲ್ಲಿ ಮತ್ತೊಂದು ಅನುಮಾನಾಸ್ಪದ ಸಾವಿನ ಘಟನೆ ಬೆಳಕಿಗೆ ಬಂದಿದ್ದು, ಭಾರತಿನಗರದ ಫ್ರೂಟ್ಸ್ ಮಾರ್ಕೆಟ್ ಸಮೀಪ ಕಟ್ಟಡವೊಂದರ ನಾಲ್ಕನೇ ಮಹಡಿಯಿಂದ ಬಿದ್ದು ಯುವಕನೊಬ್ಬ ಸಾವನ್ನಪ್ಪಿರುವ ಘಟನೆ ನಡೆದಿದೆ. ಈ ಘಟನೆ ಜನವರಿ 30ರಂದು ನಡೆದಿದ್ದು, ಸಾವು ಹಲವು ಅನುಮಾನಗಳಿಗೆ ಕಾರಣವಾಗಿದೆ.

ಮೃತನನ್ನು ಇರ್ಫಾನ್ ಮುಲ್ಲಾನಿ (26) ಎಂದು ಗುರುತಿಸಲಾಗಿದೆ. ಮಾಹಿತಿಯಂತೆ, ಇರ್ಫಾನ್ ತನ್ನ ಸಂಬಂಧಿಕರ ಮನೆಗೆ ಭೇಟಿ ನೀಡಲು ಬಂದಿದ್ದ. ಈ ವೇಳೆ ಏಕಾಏಕಿ ಕಟ್ಟಡದ ನಾಲ್ಕನೇ ಮಹಡಿಯಿಂದ ಕೆಳಗೆ ಬಿದ್ದು ಗಂಭೀರವಾಗಿ ಗಾಯಗೊಂಡಿದ್ದಾನೆ. ಸ್ಥಳೀಯರು ತಕ್ಷಣ ಆತನನ್ನು ಆಸ್ಪತ್ರೆಗೆ ಕರೆದೊಯ್ಯಲು ಯತ್ನಿಸಿದರೂ, ಅಷ್ಟರಲ್ಲೇ ಇರ್ಫಾನ್ ಮೃತಪಟ್ಟಿದ್ದಾನೆ ಎಂದು ತಿಳಿದುಬಂದಿದೆ.

ಘಟನೆಯ ಕುರಿತು ಕುಟುಂಬಸ್ಥರು ಗಂಭೀರ ಅನುಮಾನ ವ್ಯಕ್ತಪಡಿಸಿದ್ದು, ಇರ್ಫಾನ್ ಅಪಘಾತವಾಗಿ ಬಿದ್ದಿಲ್ಲ, ಯಾರೋ ಮೇಲಿಂದ ತಳ್ಳಿರಬಹುದು ಎಂಬ ಶಂಕೆಯನ್ನು ಮುಂದಿಟ್ಟಿದ್ದಾರೆ. ಈ ಹಿನ್ನೆಲೆಯಲ್ಲಿ ಪ್ರಕರಣದ ಸುತ್ತ ಮುತ್ತ ಹಲವು ಪ್ರಶ್ನೆಗಳು ಉದ್ಭವಿಸಿವೆ.

ಮಾಹಿತಿ ತಿಳಿದ ಕೂಡಲೇ ಸ್ಥಳಕ್ಕೆ ಧಾವಿಸಿದ ಭಾರತಿನಗರ ಪೊಲೀಸ್ ಠಾಣೆಯ ಸಿಬ್ಬಂದಿ ಪರಿಶೀಲನೆ ನಡೆಸಿದ್ದು, ಪ್ರಾಥಮಿಕವಾಗಿ ಅಸಹಜ ಸಾವು ಪ್ರಕರಣವಾಗಿ ದೂರು ದಾಖಲಿಸಿಕೊಂಡಿದ್ದಾರೆ. ಸಾವಿಗೆ ನಿಖರ ಕಾರಣ ತಿಳಿದುಬರಲು ಪೊಲೀಸರು ವಿವಿಧ ಆಯಾಮಗಳಿಂದ ತನಿಖೆ ಕೈಗೊಂಡಿದ್ದಾರೆ. ಕಟ್ಟಡದಲ್ಲಿದ್ದವರು, ಸ್ಥಳೀಯರು ಹಾಗೂ ಸಂಬಂಧಿಕರನ್ನು ವಿಚಾರಣೆ ನಡೆಸಲಾಗುತ್ತಿದ್ದು, ಸಿಸಿಟಿವಿ ದೃಶ್ಯಗಳ ಪರಿಶೀಲನೆಯೂ ನಡೆಯುತ್ತಿದೆ.

ಯುವಕನ ಅಕಾಲಿಕ ಸಾವು ಕುಟುಂಬಸ್ಥರು ಹಾಗೂ ಸ್ಥಳೀಯರಲ್ಲಿ ತೀವ್ರ ಆಘಾತ ಮೂಡಿಸಿದ್ದು, ತನಿಖೆಯ ನಂತರವೇ ಸಾವಿನ ಹಿನ್ನಲೆ ಸ್ಪಷ್ಟವಾಗಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಅಕ್ರಮ ಬಾಂಗ್ಲಾ ವಲಸಿಗರಿಗೆ ಮನೆ ಇಲ್ಲ, ಗಡಿಪಾರು ಗ್ಯಾರಂಟಿ: ಸಿಎಂ ಸಿದ್ದರಾಮಯ್ಯ

**ಬೆಂಗಳೂರು:** ನಮ್ಮ ಸರ್ಕಾರ ದಾರಿ ತಪ್ಪಿಲ್ಲ ಮತ್ತು ನಾನು ಅಸಹಾಯಕ ಮುಖ್ಯಮಂತ್ರಿಯೂ ಅಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಪಕ್ಷಗಳ ಟೀಕೆಗೆ ತೀವ್ರ ಪ್ರತಿಕ್ರಿಯೆ ನೀಡಿದರು. ಕಳೆದ ಎರಡೂವರೆ ವರ್ಷಗಳ ಆಡಳಿತಾವಧಿಯಲ್ಲಿ ಜನರಿಗೆ ನೀಡಿದ ಎಲ್ಲ ಭರವಸೆಗಳನ್ನು ಸರ್ಕಾರ ಸಮರ್ಪಕವಾಗಿ ಈಡೇರಿಸಿದೆ ಎಂದು ಅವರು ಸ್ಪಷ್ಟಪಡಿಸಿದರು. ಜೊತೆಗೆ, ರಾಜ್ಯದಲ್ಲಿರುವ ಅಕ್ರಮ ಬಾಂಗ್ಲಾದೇಶಿ ವಲಸಿಗರಿಗೆ ಯಾವುದೇ ಕಾರಣಕ್ಕೂ ಮನೆ ನೀಡಲಾಗುವುದಿಲ್ಲ ಮತ್ತು ಅವರನ್ನು ಗುರುತಿಸಿ ರಾಜ್ಯದಿಂದ ಹೊರ ಕಳುಹಿಸುವ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಘೋಷಿಸಿದರು.

ವಿಧಾನಸಭೆಯಲ್ಲಿ ರಾಜ್ಯಪಾಲರ ಭಾಷಣದ ಮೇಲಿನ ವಂದನಾ ನಿರ್ಣಯದ ಚರ್ಚೆಗೆ ಉತ್ತರಿಸಿದ ಸಿಎಂ, ತಮ್ಮ ಸರ್ಕಾರದ ಸಾಧನೆಗಳನ್ನು ಅಂಕಿಅಂಶಗಳ ಸಮೇತ ಸದನದ ಮುಂದಿಟ್ಟರು. ಜನಪರ ಹಾಗೂ ಸಮಾಜಮುಖಿ ಆಡಳಿತವನ್ನು ನಾವು ನೀಡುತ್ತಿದ್ದೇವೆ ಎಂಬುದನ್ನು ಸಂಖ್ಯೆಗಳ ಮೂಲಕ ವಿವ–ರಿಸುವ ಪ್ರಯತ್ನ ಮಾಡಿದರು.

**ಅಕ್ರಮ ಬಾಂಗ್ಲಾ ವಲಸಿಗರಿಗೆ ಇಲ್ಲ ಅವಕಾಶ: ಕಠಿಣ ನಿಲುವು:** ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರುವ ಬಾಂಗ್ಲಾದೇಶದ ವಲಸಿಗರ ವಿಚಾರದಲ್ಲಿ ಸರ್ಕಾರದ ನಿಲುವು ಸ್ಪಷ್ಟವಾಗಿದೆ ಎಂದು ಸಿದ್ದರಾಮಯ್ಯ ತಿಳಿಸಿದರು. ಅಕ್ರಮ ವಲಸಿಗರಿಗೆ ಯಾವುದೇ ಸಂದರ್ಭದಲ್ಲೂ ಸರ್ಕಾರಿ ಮನೆಗಳನ್ನು ನೀಡುವುದಿಲ್ಲ. ಅವರನ್ನು ಗುರುತಿಸಿ ಕಾನೂನು ಪ್ರಕ್ರಿಯೆಯ ಮೂಲಕ ರಾಜ್ಯದಿಂದ ಹೊರಹಾಕಲಾಗುವುದು ಎಂದು ಅವರು ಹೇಳಿದರು.



**ಅಂಕಿಅಂಶಗಳ ಮೂಲಕ ಹೋಲಿಕೆ:**ತಮ್ಮ ಕಾಂಗ್ರೆಸ್ ಸರ್ಕಾರ ಮತ್ತು ಹಿಂದಿನ ಬಿಜೆಪಿ ಸರ್ಕಾರದ ಆಡಳಿತಾವಧಿಯ ನಡುವಿನ ಅಭಿವೃದ್ಧಿ ವ್ಯತ್ಯಾಸವನ್ನು ವಿವರಿಸಿದ ಸಿಎಂ, ಹಿಂದುಳಿದ ವರ್ಗಗಳ ಕಲ್ಯಾಣಕ್ಕೆ ತಮ್ಮ ಸರ್ಕಾರ ಹೆಚ್ಚಿನ ಒತ್ತು ನೀಡಿದೆ ಎಂದರು.

2013–14 ರಿಂದ 2018ರ ಅವಧಿಯಲ್ಲಿ ಕಾಂಗ್ರೆಸ್ ಸರ್ಕಾರ 543 ಹಾಸ್ಟೆಲ್‌ಗಳನ್ನು ನಿರ್ಮಿಸಿತ್ತು. ಆದರೆ 2019 ರಿಂದ 2023ರ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೇವಲ 5 ಹಾಸ್ಟೆಲ್‌ಗಳು ಮಾತ್ರ ನಿರ್ಮಾಣವಾಗಿವೆ ಎಂದು ಹೇಳಿದರು. 2023–24ರಿಂದ ಇಂದಿನವರೆಗೂ ತಮ್ಮ ಸರ್ಕಾರ 220 ಹಾಸ್ಟೆಲ್‌ಗಳನ್ನು ನಿರ್ಮಿಸಿದೆ ಎಂದು ವಿವರಿಸಿದರು.

ವಸತಿ ಯೋಜನೆಗಳ ವಿಷಯದಲ್ಲೂ ಕಾಂಗ್ರೆಸ್ ಸರ್ಕಾರ ಸಾಧನೆ ಮಾಡಿದೆ ಎಂದು ಹೇಳಿದ ಸಿಎಂ, ತಮ್ಮ ಆಡಳಿತದಲ್ಲಿ 14.52 ಲಕ್ಷ ಮನೆಗಳನ್ನು ನಿರ್ಮಿಸಲಾಗಿದ್ದು, ಬಿಜೆಪಿ ಅವಧಿಯಲ್ಲಿ ಕೇವಲ 5 ಲಕ್ಷ ಮನೆಗಳಷ್ಟೇ ನಿರ್ಮಾಣವಾಗಿವೆ ಎಂದು ಹೇಳಿದರು. ಈ ಎಲ್ಲಾ ಸತ್ಯಾಂಶಗಳನ್ನು ರಾಜ್ಯಪಾಲರ ಭಾಷಣದಲ್ಲಿ ಸೇರಿಸಲಾಗಿ–ತ್ತು ಎಂದು ಅವರು ತಿಳಿಸಿದರು.

ಕರ್ನಾಟಕದ ಆಡಳಿತ ಮಾದರಿ ಜನಪರ ಹಾಗೂ ಅಭಿವೃದ್ಧಿ ಕೇಂದ್ರೀತವಾಗಿದೆ. ಈ ಅಭಿವೃದ್ಧಿ ಮಾದರಿಯನ್ನು 21 ಕ್ಕಿಂತ ಹೆಚ್ಚು ಕೇಂದ್ರ ಸಚಿವರು ಹಾಗೂ ಹಲವು ರಾಜ್ಯಗಳ ಮುಖ್ಯಮಂತ್ರಿಗಳು ಶ್ಲಾಘಿಸಿದ್ದಾರೆ. ಆದ್ದರಿಂದ ರಾಜ್ಯಪಾಲರು ಸರ್ಕಾರದ ಭಾಷಣವನ್ನು ಓದಿದ್ದರೆ, ಜನರಿಗೆ ನಮ್ಮ ಆಡಳಿತದ ಬಗ್ಗೆ ಸಮಗ್ರ ಮಾಹಿತಿ ದೊರಕುತ್ತಿತ್ತು ಎಂದು ಸಿಎಂ ಅಭಿಪ್ರಾಯಪಟ್ಟರು.

**ಬಿಜೆಪಿ ಸರ್ಕಾರಕ್ಕೆ ತೀವ್ರ ಟೀಕೆ:**ಹಿಂದಿನ ಬಿಜೆಪಿ ಸರ್ಕಾರವನ್ನು 'ಸಂವೇದನಾರಹಿತ' ಎಂದು ಟೀಕಿಸಿದ ಸಿದ್ದರಾಮಯ್ಯ, ರೈತರು ಗೊಬ್ಬರ ಕೇಳಿದ್ದಕ್ಕೆ ಗೋಲಿಬಾರ್ ನಡೆಸಿದ ಇತಿಹಾಸ ಬಿಜೆಪಿಯದ್ದು ಎಂದು ಆರೋಪಿಸಿದರು. ಅನ್ನಭಾಗ್ಯ ಯೋಜನೆಯಡಿ ಅಕ್ಕಿಯನ್ನು ಕಡಿತಗೊಳಿಸಿದ್ದು ಕೂಡ ಅವರ ಆಡಳಿತದ ನಿರ್ಲಕ್ಷ್ಯದ ಸಾಕ್ಷಿ ಎಂದರು.

ಆದರೆ ತಮ್ಮ ಸರ್ಕಾರ ಕಬ್ಬು ಬೆಳೆಗಾರರಿಗೆ ಎಫ್‌ಆರ್‌ಪಿ ದರಕ್ಕಿಂತ ಹೆಚ್ಚಿನ ಬೆಲೆ ನೀಡಲು 300 ಕೋಟಿ ಹೆಚ್ಚುವರಿ ಹೊರೆ ಹೊತ್ತಿದೆ. ಮೆಕ್ಕೆಜೋಳ ಖರೀದಿಗೆ 40 ಲಕ್ಷ ಮೆಟ್ರಿಕ್ ಟನ್ ವ್ಯವಸ್ಥೆ ಮಾಡಲಾಗಿದೆ ಎಂದು ವಿವರಿಸಿದರು.

**ಎಸ್ ಸಿ ಪಿ ಟಿ ಎಸ್ ಪಿ : ಯೋಜನೆ ಮತ್ತು ತೆರಿಗೆ ವಿವಾದ**ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಜಾರಿಗೆ ತಂದ ಯೋಜನೆಯನ್ನು ಕೇಂದ್ರ ಸರ್ಕಾರವೂ ಅನುಸ–ರಿಸಬೇಕು ಎಂದು ಸಿಎಂ ಒತ್ತಾಯಿಸಿದರು. ಈ ಯೋಜನೆಯಡಿ ಕಳೆದ ಎರಡು ವರ್ಷಗಳಲ್ಲಿ ತಮ್ಮ ಸರ್ಕಾರ 1.17 ಲಕ್ಷ ಕೋಟಿಗೂ ಹೆಚ್ಚು ಅನುದಾನ ನೀಡಿದೆ ಎಂದು ತಿಳಿಸಿದರು.


ರಾಜ್ಯದಲ್ಲಿ ಬೆಲೆ ಏರಿಕೆ ಮಾಡಲಾಗಿದೆ ಎಂಬ ಪ್ರತಿಪಕ್ಷಗಳ ಆರೋಪಕ್ಕೆ ಉತ್ತರಿಸಿದ ಸಿದ್ದರಾಮಯ್ಯ, ಇತರ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ತೆರಿಗೆ ಮತ್ತು ಬೆಲೆ ಏರಿಕೆ ಪ್ರಮಾಣ ಗಣನೀಯವಾಗಿ ಕಡಿಮೆ ಇದೆ ಎಂದು ಸ್ಪಷ್ಟಪಡಿಸಿದರು. ನಾವು ವಾಸ್ತವಕ್ಕೆ ಹತ್ತಿರವಾದ ಬಜೆಟ್ ಮಂಡಿಸಿದ್ದೇವೆ ಎಂದು ಸಮರ್ಥಿಸಿಕೊಂಡರು.

## ಫಿಲ್ಮಿ ಮಾದರಿಯ ಕಳ್ಳತನ: ಮನೆಕೆಲಸದ ನೆಪದಲ್ಲಿ 18 ಕೋಟಿ ಚಿನ್ನ ಲೂಟಿ

**ಬೆಂಗಳೂರು:** ಬೆಂಗಳೂರಿನಲ್ಲಿ ಇತ್ತೀಚೆಗೆ ಸಂಭವಿಸಿದ್ದ ಬರೋಬ್ಬರಿ 18 ಕೋಟಿ ಮೌಲ್ಯದ ಚಿನ್ನಾಭರಣ ಕಳ್ಳತನ ಪ್ರಕರಣ ನಗರದಲ್ಲಿ ಭಾರೀ ಸಂಚಲನ ಮೂಡಿಸಿದೆ. ಪ್ರಕರಣದ ತನಿಖೆಯನ್ನು ಕೈಗೆತ್ತಿಕೊಂಡಿರುವ ಮಾರತ್ ಹಳ್ಳಿ ಪೊಲೀಸರು ತಡವಾದರೂ ಚುರುಕಿನ ಹಾಗೂ ಸಂಯೋಜಿತ ಕಾರ್ಯಾಚರಣೆಗೆ ಮುಂದಾಗಿದ್ದು, ಆರೋಪಿಗಳನ್ನು ಹಿಡಿಯಲು ಬಲೆ ಬೀಸಿದ್ದಾರೆ. ಮನೆಕೆಲಸದ ಹೆಸರಿನಲ್ಲಿ ಮನೆಮಾಲೀಕರ ವಿಶ್ವಾಸ ಗಳಿಸಿ ಬಳಿಕ ಅಪಾರ ಪ್ರಮಾಣದ ಚಿನ್ನಾಭರಣ ದೋಚಿದ್ದವರು ನೇಪಾಳಿ ದಂಪತಿ ಎಂಬುದು ತನಿಖೆಯಿಂದ ದೃಢಪಟ್ಟಿದೆ.

**ತನಿಖೆಯಲ್ಲಿ ಬಯಲಾದ ದಂಪತಿಯ ಸತ್ಯ:** ಬೆಂಗಳೂರಿನಲ್ಲಿ ನಡೆದ 18 ಕೋಟಿ ಮೌಲ್ಯದ ಚಿನ್ನಾಭರಣ ಕಳ್ಳತನದ ಸುಳಿವು ಹಿಡಿದು ಮುಂದುವರೆದ ತನಿಖೆಯ ವೇಳೆ, ಆರೋಪಿಗಳ ಕುರಿತು ಹಲವು ಅಚ್ಚರಿಯ ಸಂಗತಿಗಳು ಬೆಳಕಿಗೆ ಬಂದಿವೆ. ತನಿಖಾಧಿಕಾರಿಗಳ ಮಾಹಿತಿ ಪ್ರಕಾರ, ಆರೋಪಿಗಳು ತಮ್ಮ ನಿಜ ಹೆಸರುಗಳನ್ನು ಮರೆಮಾಚಿ ದಿನೇಶ್ ಹಾಗೂ ಕಮಲ ಅಥವಾ ಸಲೀನಾ ಎಂಬ ನಕಲಿ ಹೆಸರುಗಳನ್ನು ಬಳಸಿಕೊಂಡು ಮನೆಕೆಲಸಕ್ಕೆ ಸೇರಿಕೊಂಡಿದ್ದರು. ಮನೆಯೊಳಗಿನ ಚಲನವಲನ, ಲಾಕರ್ ವ್ಯವಸ್ಥೆ ಮತ್ತು ಚಿನ್ನಾಭರಣದ ವಿವರಗಳನ್ನು ಸೂಕ್ಷ್ಮವಾಗಿ ಗಮನಿಸಿದ ಬಳಿಕ ಸೂಕ್ತ ಸಮಯದಲ್ಲಿ ಕಳ್ಳತನ ನಡೆಸಿ ಪರಾರಿಯಾಗುತ್ತಿದ್ದರು ಎನ್ನಲಾಗಿದೆ.

ಪೊಲೀಸರ ಶಂಕೆಯಂತೆ, ಈ ನೇಪಾಳಿ ದಂಪತಿ ಕೇವಲ





ಬೆಂಗಳೂರಿನಲ್ಲಷ್ಟೇ ಅಲ್ಲದೆ, ದೇಶದ ವಿವಿಧ ಭಾಗಗಳಲ್ಲಿ ಇದೇ ಮಾದರಿಯ ಕಳ್ಳತನ ಕೃತ್ಯಗಳನ್ನು ನಡೆಸಿರುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಪ್ರಕರಣವನ್ನು ಅಂತಾರಾಜ್ಯ ಮಟ್ಟದ ಕಳ್ಳತನ ಜಾಲದ ದೃಷ್ಟಿಯಿಂದ ತನಿಖೆ ನಡೆಸಲಾಗುತ್ತಿದೆ.

**ಏಳು ವಿಶೇಷ ತಂಡಗಳ ರಚನೆ:** ಪ್ರಕರಣದ ಗಂಭೀರತೆಯನ್ನು ಮನಗಂಡ ಮಾರತ್ ಹಳ್ಳಿ ಪೊಲೀಸರು ಸುಮಾರು ಏಳು ವಿಶೇಷ ತಂಡಗಳನ್ನು ರಚಿಸಿದ್ದು, ಮುಂಬೈ, ಕೊಲ್ಕತ್ತಾ ಹಾಗೂ ನೇಪಾಳ ಸೇರಿದಂತೆ ಹಲವು ಕಡೆಗಳಲ್ಲಿ ಶೋಧ ಕಾರ್ಯ ನಡೆಸುತ್ತಿದ್ದಾರೆ. ಆರೋಪಿಗಳು ನೇಪಾಳಕ್ಕೆ ಪರಾರಿಯಾಗಿರುವ ಶಂಕೆಯಿದ್ದು, ಅಲ್ಲಿ ಪತ್ತೆಹಚ್ಚುವುದು ಸವಾಲಾಗಬಹುದು ಎಂದು ಪೊಲೀಸರು ತಿಳಿಸಿದ್ದಾರೆ.

ಅದರ ಜೊತೆಗೆ, ಆರೋಪಿಗಳಿಗೆ ಸ್ಥಳೀಯವಾಗಿ ಯಾರಾದರೂ ನೆರವು ನೀಡಿದರೇ? ಕಳ್ಳತನದ ಬಳಿಕ ಚಿನ್ನಾಭರಣ ಮಾರಾಟ ಅಥವಾ ಸಾಗಣೆಯಲ್ಲಿ ಮಧ್ಯವರ್ತಿಗಳ ಪಾತ್ರವಿದೆಯೇ? ಎಂಬ ಎಲ್ಲಾ ಆಯಾಮಗಳಿಂದ ತನಿಖೆ ಮುಂದುವರಿದಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

**ಈ ಹಿಂದೆಯೂ ಹಲವು ಕಳ್ಳತನ ಪ್ರಕರಣಗಳು:** ತನಿಖೆಯ ವೇಳೆ ಈ ದಂಪತಿ ಹಿಂದೆಯೂ ವಿವಿಧ ರಾಜ್ಯಗಳಲ್ಲಿ ಕಳ್ಳತನ ನಡೆಸಿದ್ದ ಮಾಹಿತಿ ಲಭ್ಯವಾಗಿದೆ. ಪುಣೆಯ ಭಾವ್ಧಾನ್ ಪ್ರದೇಶದ ವಿಂಡ್ಮಿಲ್ ಸೊಸೈಟಿಯಲ್ಲಿ ರತ್ನಾದೀಪ್ ರಂಗನಾಥ್ ರಾವ್ ಅವರ ಮನೆಯಲ್ಲಿ ಮನೆಕೆಲಸಕ್ಕೆ ಸೇರಿದ್ದ ಆರೋಪಿಗಳು, ಸುಮಾರು ಆರು ತಿಂಗಳ ಕಾಲ ವಿಶ್ವಾಸ ಗಳಿಸಿದ ಬಳಿಕ ಮನೆಯಲ್ಲಿ ಯಾರೂ ಇಲ್ಲದ ಸಂದರ್ಭ ಲಾಕರ್ ಒಡೆದು ಚಿನ್ನಾಭರಣ ದೋಚಿ ಪರಾರಿಯಾಗಿದ್ದರು ಎನ್ನಲಾಗಿದೆ.

ಇದಲ್ಲದೆ, 2025ರ ಅಕ್ಟೋಬರ್‌ನಲ್ಲಿ ಮಹಾರಾಷ್ಟ್ರದ ನಿವೃತ್ತ ಸರ್ಕಾರಿ ಅಧಿಕಾರಿಯೊಬ್ಬರ ಮನೆಯಲ್ಲಿ ಸುಮಾರು 16 ಲಕ್ಷ ಮೌಲ್ಯದ ಚಿನ್ನಾಭರಣ ಕಳ್ಳತನ ನಡೆಸಿದ್ದ ಮಾಹಿತಿ ಕೂಡ ತನಿಖೆ ವೇಳೆ ದೃಢಪಟ್ಟಿದೆ. ಈ ಎಲ್ಲ ಪ್ರಕರಣಗಳ ಹಿನ್ನೆಲೆ ಪರಿಶೀಲಿಸಿ, ದಂಪತಿಯ ವಿರುದ್ಧ ಬಲವಾದ ಸಾಕ್ಷ್ಯ ಸಂಗ್ರಹಿಸುವ ಕೆಲಸವನ್ನು ಪೊಲೀಸರು ಮುಂದುವರಿಸಿದ್ದಾರೆ.

ಪ್ರಸ್ತುತ ಆರೋಪಿಗಳ ಬಂಧನಕ್ಕಾಗಿ ಶೋಧ ಕಾರ್ಯ ತೀವ್ರಗೊಂಡಿದ್ದು, ಈ ಬಹುಕೋಟಿ ಚಿನ್ನಾಭರಣ ಕಳ್ಳತನ ಪ್ರಕರಣದಲ್ಲಿ ಶೀಘ್ರದಲ್ಲೇ ಮಹತ್ವದ ಬೆಳವಣಿಗೆಗಳು ಸಂಭವಿಸುವ ನಿರೀಕ್ಷೆಯಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.